# ಮೈಸೂರು ವಿಶ್ವವಿದ್ಯಾನಿಲಯ

(ಸ್ಥಾಪನೆ-1916)
(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್‌ಐಆರ್‌ಎಫ್-2022 ವಿಶ್ವವಿದ್ಯಾನಿಲಯ ವರ್ಗದಲ್ಲಿ 33ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 54ನೇ ಸ್ಥಾನ)

ಸಂಖ್ಯೆ: ಪವಿ/8.4/47/2012-13

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
ದಿನಾಂಕ: 02-05-2023

## ಅಧಿಸೂಚನೆ

ವಿಷಯ: ಮೇ/ಜೂನ್-2023ರಲ್ಲಿ ಜರುಗಲಿರುವ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ನ B.Ed. ಸ್ನಾತಕ ಪದವಿ (UG) ಪರೀಕ್ಷೆಯ ಬಗ್ಗೆ.

ಉಲ್ಲೇಖ: ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಪರಿಷ್ಕೃತ ಶೈಕ್ಷಣಿಕ ವೇಳಾಪಟ್ಟಿಯ ಅಧಿಸೂಚನೆ ಸಂಖ್ಯೆ:ಎಸಿ6/159/2020-21, ದಿನಾಂಕ: 27-04-2023.

******

ಮೇ/ಜೂನ್-2023ರ ಮಾಹೆಯಲ್ಲಿ ನಡೆಯಲಿರುವ **ಪ್ರಥಮ ಹಾಗೂ ತೃತೀಯ** ಸೆಮಿಸ್ಟರ್‌ನ B.Ed. (ಸಿ.ಬಿ.ಸಿ.ಎಸ್. ಮತ್ತು ಸಿ.ಎ.ಜಿ.ಪಿ. ಸ್ಕೀಂ) ಸ್ನಾತಕ ಪದವಿ ಪರೀಕ್ಷೆಗಳು **ದಿನಾಂಕ: 30-05-2023** ರಿಂದ ಪ್ರಾರಂಭವಾಗಲಿದೆ, ಪದವಿ ಪರೀಕ್ಷೆಗಳ ಸಂಬಂಧದ ವೇಳಾಪಟ್ಟಿ ಹಾಗೂ ಪರೀಕ್ಷಾ ಶುಲ್ಕದ ಮಾಹಿತಿಗಳು ಕೆಳಕಂಡಂತಿರುತ್ತದೆ.

| ಕ್ರ.ಸಂ | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು (ವಿದ್ಯಾರ್ಥಿಗಳು UUCMS ಅಡಿಯಲ್ಲಿ ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಸಂದರ್ಭದಲ್ಲಿ ತಮ್ಮ ಕೋರ್ಸಿನ ಪತ್ರಿಕೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು). | 12-05-2023 |
| 2 | ರೂ.100/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ (1st penalty) | 13-05-2023 |
| 3 | ರೂ.200/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ (2nd penalty) | 14-05-2023 |
| 4 | **$C_1$ & $C_2$** (continuous assessment) ಅಂಕಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಹಾಗೂ ಹಾಜರಾತಿಯನ್ನು ಅಪ್‌ಲೋಡ್ ಮಾಡುವ ದಿನಾಂಕ | 25-05-2023 |
| 5 | ಪ್ರವೇಶ ಪತ್ರಗಳ ಮುದ್ರಣದ ನಂತರ ಈ ಕಛೇರಿಗೆ ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕಗಳ ಮಾಹಿತಿಯನ್ನು ಕ್ರೋಢಿಕರಿಸಿ ಈ ಕಛೇರಿಗೆ ಸಲ್ಲಿಸುವುದು. | 25-05-2023 |
| 6 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | 30-05-2023 |

**ಸೂಚನೆಗಳು:**

1. ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ನ ಪರೀಕ್ಷಾ ಕಾರ್ಯಗಳು UUCMS ಅಡಿಯಲ್ಲಿರುವುದರಿಂದ ಕಾಲೇಜಿನ ವತಿಯಿಂದ "academic moduleನಲ್ಲಿ curiculam mapping" ಮಾಡಿದ ನಂತರ, ವಿದ್ಯಾರ್ಥಿಗಳು ಆನ್‌ಲೈನ್ (UUCMS) ಮೂಲಕ ಪತ್ರಿಕೆಗಳನ್ನು ಆಯ್ಕೆ ಮಾಡಿಕೊಂಡು "mapping" ಮಾಡಲು ಕಾಲೇಜಿನವರು QP Code/Course Code ಗಳನ್ನು ನೀಡಬೇಕು ಹಾಗೂ ಆನ್‌ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಗದರ್ಶನ ನೀಡುವುದು.

2. **ಕಾಲೇಜಿನ ಆಡಳಿತ ವರ್ಗ ಹಾಗೂ ಸಿಬ್ಬಂದಿ, ವಿದ್ಯಾರ್ಥಿಗಳು ಭರ್ತಿ ಮಾಡಿದ ವಿಷಯಗಳ ಆಯ್ಕೆ (subject selection) ಹಾಗೂ ಪರೀಕ್ಷಾ ಅರ್ಜಿಗಳಲ್ಲಿ ನ್ಯೂನತೆಗಳಿದ್ದರೆ,** (ಪ್ರವೇಶ ಪತ್ರಗಳ ಮುದ್ರಣಕ್ಕೆ ಸಂಬಂಧಿಸಿದಂತೆ, ಪ್ರಾಂಶುಪಾಲರ ಅನುಮೋದನೆ ಪಡೆಯುವ ಮೊದಲು ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪತ್ರಿಕೆಗಳನ್ನು ಮನಃ ಪರಿಶೀಲಿಸಿಕೊಳ್ಳುವುದು, **ಇಲ್ಲದಿದ್ದರೆ ಕಾಲೇಜಿನ ಪ್ರಾಂಶುಪಾಲರು ಇಂತಹ ತಪ್ಪುಗಳಿಗೆ ಹೊಣೆಗಾರರಾಗಿರುತ್ತಾರೆ.**

**ಪರೀಕ್ಷಾ ಶುಲ್ಕಗಳು:**

| | | |
|---|---|---|
| 1. | ಪೂರ್ಣ ಪರೀಕ್ಷೆಗೆ | ರೂ.1,430/- |
| | ಒಂದು ವಿಷಯಕ್ಕೆ (ಪ್ರಾಯೋಗಿಕ ಪರೀಕ್ಷೆಯೊಂದಿಗೆ) | ರೂ.847/- |
| | ಒಂದು ವಿಷಯಕ್ಕೆ (ಪ್ರಾಯೋಗಿಕ ಪರೀಕ್ಷೆ ಹೊರತುಪಡಿಸಿ) | ರೂ.484/- |
| 2. | ಅಂಕಪಟ್ಟಿ ಶುಲ್ಕ | ರೂ.352/- |

***Subject to a maximum of whole examination Fee fixed per semester.***

**ವಿಶೇಷ ಸೂಚನೆಗಳು:**

1. **ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.**
2. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಚಾತುರ್ಮಾಸದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ **ರೂ.352/-**ನ್ನು ಸಹ ಪಾವತಿಸತಕ್ಕದ್ದು. ಪರೀಕ್ಷಾ ಅರ್ಜಿಗೆ ಪ್ರತ್ಯೇಕ ಶುಲ್ಕವಿರುವುದಿಲ್ಲ.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ: ವಿಘ/1/9/2013-14, ದಿನಾಂಕ 25.09.2013 ಪ್ರಕಾರ 2013-14ನೇ ಶೈಕ್ಷಣಿಕ ಸಾಲಿನಿಂದ ಪದವಿ ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ **ರೂ.2.5** ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪ್ರಮಾಣ ಪತ್ರ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮ ತೆಗೆದುಕೊಳ್ಳುವುದು.
4. ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯ **ರೂ.2.5 ಲಕ್ಷಗಳು ಮೀರಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು.ಪ್ರವರ್ಗ-1 ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು.**

**ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
3. 2022-23ನೇ ಸಾಲಿನಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮುಖಾಂತರವೇ ಕಡ್ಡಾಯವಾಗಿ ಪಾವತಿಸತಕ್ಕದ್ದು.
4. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿಸುವುದು ಹಾಗೂ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ ಎಂದು ಪ್ರಾಂಶುಪಾಲರು ಸಹಿ ಮಾಡಿ ದೃಢೀಕರಿಸಿರುವ ಭಾವಚಿತ್ರವನ್ನು ಹಾಜರಾತಿ ಪತ್ರಕ್ಕೆ ಅಂಟಿಸಿ ಪರೀಕ್ಷಾ ಅರ್ಜಿಯೊಂದಿಗೆ ಕಾಲೇಜಿಗೆ ನೀಡುವುದು.
5. **ಭಾವಚಿತ್ರಗಳಿಲ್ಲದ ಹಾಗೂ ಕುಲಸಚಿವರು (ಪರೀಕ್ಷಾಂಗ) ಅಥವಾ ಪ್ರಾಂಶುಪಾಲರ ಸಹಿ/ಮೊಹರು ಇಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.**

ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:

1. ವಿದ್ಯಾರ್ಥಿಗಳು ಗೈರುಹಾಜರಾದಲ್ಲಿ ಆ ಪರೀಕ್ಷಾ ದಿನದಂದೇ ಆನ್‌ಲೈನ್ ಮುಖಾಂತರ ಗೈರುಹಾಜರಿಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

ಕುಲಸಚಿವ (ಪರೀಕ್ಷಾಂಗ) ಅವರಿಂದ ಅನುಮೋದಿಸಲ್ಪಟ್ಟಿದೆ.

K.N. 02/5/23

ಉಪ ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಬಿ.ಎಡ್. ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಉಪಕುಲಸಚಿವರು (ಶೈಕ್ಷಣಿಕ), ಆಡಳಿತ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಅಧೀಕ್ಷಕರು/ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಸಂಬಂಧಿಸಿದ ಕಡತಕ್ಕೆ.